# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **761(938)** |
| **ಸದಸ್ಯರ ಹೆಸರು** | **ಡಾ|| ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **15.12.2025** |
| **ಉತ್ತರಿಸುವವರು** | **ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಭಾಗದ ಅರಣ್ಯ ಪ್ರದೇಶದಲ್ಲಿ ಜನವರಿಯಿಂದ ಇದುವರೆಗೆ ಒಟ್ಟು 15 ಹುಲಿಗಳು ಸಾವನ್ನಪ್ಪಿರುವುದಾಗಿ ವರದಿಯಾಗಿದೆ. ಇದು ನಿಜವೇ; | ಮೈಸೂರು ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಜನವರಿಯಿಂದ ಯಾವುದೇ ಹುಲಿ ಸಾವಿನ ಪ್ರಕರಣಗಳು ಇರುವುದಿಲ್ಲ, |
| ಆ) | ನಿಜವಾಗಿದ್ದರೆ. ಇಷ್ಟೊಂದು ಹುಲಿಗಳ ಸಾವಿಗೆ ಕಾರಣಗಳೇನು: ತಪ್ಪಿತಸ್ಥರ ಮೇಲೆ ಕೈಗೊಂಡ ಕ್ರಮಗಳೇನು: | ಆದರೆ ಚಾಮರಾಜನಗರ ಜಿಲ್ಲೆಯ ಮಲೈ ಮಹದೇಶ್ವರ ವನ್ಯಜೀವಿ ವಿಭಾಗದ ಹೂಗ್ಯಂ ವನ್ಯಜೀವಿ ವಲಯದಲ್ಲಿ 05 ಹುಲಿಗಳಿಗೆ ವಿಷ ಪ್ರಾಶನ ಮಾಡಿ ಹತ್ಯೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ 03 ಜನ ಆರೋಪಿಗಳನ್ನು ದಸ್ತಗಿರಿ ಮಾಡಿದ್ದು, ಸದರಿ ಆರೋಪಿತರ ಮೇಲೆ ದೋಷಾರೋಪಣಾ ಪಟ್ಟಿ ತಯಾರಿಸಿ ನ್ಯಾಯಾಲಯಕ್ಕೆ ಸಲ್ಲಿಸಲಾಗಿರುತ್ತದೆ.<br><br>ಮಲೈ ಮಹದೇಶ್ವರ ವನ್ಯಜೀವಿ ವಿಭಾಗದ ಹನೂರು ಬಫರ್ ವಲಯದಲ್ಲಿ 01 ಹುಲಿಯನ್ನು ವಿಷಪ್ರಾಶನ ಮಾಡಿ ಹತ್ಯೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ 06 ಜನ ಆರೋಪಿಗಳನ್ನು ದಸ್ತಗಿರಿ ಮಾಡಿದ್ದು, ತನಿಖೆ ಮಾಡಿ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದೆ. |
| ಇ) | ಅಳಿವಿನಂಚಿನಲ್ಲಿರುವ ಹುಲಿಗಳ ಸಂರಕ್ಷಣೆಗೆ ಶ್ರೀಮತಿ ಇಂದಿರಾ ಗಾಂಧಿಯವರು ಹುಲಿ ಯೋಜನೆ ಆರಂಭಿಸಿದ ಬಳಿಕ ರಾಜ್ಯದಲ್ಲಿ ಹುಲಿ ಸಂತತಿ ಹೆಚ್ಚಿದ್ದು ರಾಜ್ಯವು ದೇಶದಲ್ಲೇ 2ನೇ ಸ್ಥಾನದಲ್ಲಿದ್ದು ಹುಲಿ ಸಂರಕ್ಷಣೆಗೆ ಹೆಸರಾಗಿರುವ ರಾಜ್ಯದಲ್ಲಿ ಈ ರೀತಿ ಹುಲಿಗಳ ಅಸಹಜ ಸಾವೀಗಿಡಾಗುತ್ತಿರುವುದನ್ನು ತಪ್ಪಿಸಲು ಅರಣ್ಯ ಇಲಾಖೆ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ: (ವಿವರಗಳನ್ನು ನೀಡುವುದು) | ಹುಲಿಗಳ ಅಸಹಜ ಸಾವುಗಳನ್ನು ತಪ್ಪಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ, ನವದೆಹಲಿ ಇವರ ಮಾರ್ಗಸೂಚಿಯನ್ವಯ ಹುಲಿಗಳ ಸಂರಕ್ಷಣೆ ಮತ್ತು ನಿರ್ವಹಣೆಗಾಗಿ ರಾಜ್ಯದಲ್ಲಿ ಈ ಕೆಳಕಂಡ 05 ಹುಲಿ ಸಂರಕ್ಷಿತ ಪ್ರದೇಶಗಳನ್ನು ರಚಿಸಲಾಗಿರುತ್ತದೆ.<br><br>1. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ<br>2. ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ<br>3. ಭದ್ರಾ ಹುಲಿ ಸಂರಕ್ಷಿತ ಪ್ರದೇಶ<br>4. ಕಾಳಿ ಹುಲಿ ಸಂರಕ್ಷಿತ ಪ್ರದೇಶ<br>5. ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶ<br><br>ಸದರಿ ಹುಲಿ ಸಂರಕ್ಷಿತ ಪ್ರದೇಶಗಳಿಗೆ ಸಂಬಂಧಿಸಿದಂತೆ ಹುಲಿ ಸಂರಕ್ಷಣಾ ಯೋಜನೆಯನ್ನು ತಯಾರಿಸಿ ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರದ ಅನುಮೋದನೆ ಪಡೆದು ಹುಲಿಗಳ ಸಂರಕ್ಷಣಾ ಕಾರ್ಯ ಕೈಗೊಳ್ಳಲಾಗಿರುತ್ತದೆ. |

| | | |
|---|---|---|
| | | ಮುಂದುವರೆದು, ರಾಜ್ಯದಲ್ಲಿ ಹುಲಿಗಳನ್ನು ಸೇರಿ ಇತರೆ ವನ್ಯಪ್ರಾಣಿಗಳನ್ನು ಸಂರಕ್ಷಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>1. ವನ್ಯಜೀವಿ ವನ್ಯಧಾಮದ ಅನುಮೋದಿತ ನಿರ್ವಹಣಾ ಯೋಜನೆಯ ಪ್ರಕಾರ ಆವಾಸಸ್ಥಾನ, ಜಲಸಂಪನ್ಮೂಲ ಅಭಿವೃದ್ಧಿ ಕಾಮಗಾರಿಗಳು, ಅನಗತ್ಯವಾಗಿ ಬೆಳೆದ ಕಳೆಗಿಡಗಳನ್ನು ನಿರ್ಮೂಲನೆ ಮಾಡಿ ಹುಲ್ಲುಗಾವಲು ಪುನಶ್ಚೇತನ ಕಾಮಗಾರಿ ಕೈಗೊಳ್ಳಲಾಗುತ್ತಿದೆ.<br><br>2. ಇಲಾಖಾ ಸಿಬ್ಬಂದಿಗಳು ನಿರಂತರ ಗಸ್ತು ಸಂಚರಿಸಿ Mstripes ತಂತ್ರಾಂಶದ ಮೂಲಕ ಗಸ್ತಿನ ವಿವರಗಳನ್ನು ದಾಖಲಿಸಿ, ಅರಣ್ಯದಲ್ಲಿ ಹಾಗೂ ಅರಣ್ಯದಂಚಿನ ಪ್ರದೇಶಗಳಲ್ಲಿ ಉರುಳು ಪತ್ತೆ ಕಾರ್ಯಾಚರಣೆ, ಸೌರ ಬೇಲಿಗಳಿಗೆ ಅಕ್ರಮ ವಿದ್ಯುತ್ ಸಂಪರ್ಕ ಒದಗಿಸಿರುವುದನ್ನು ತಡೆಗಟ್ಟುವ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ.<br><br>3. ಕಳ್ಳಬೇಟೆ ತಡೆ ಶಿಬಿರಗಳನ್ನು ಸ್ಥಾಪಿಸಿ ವನ್ಯಜೀವಿಗಳ ಬೇಟೆಯಾಡುವುದನ್ನು ತಡೆಗಟ್ಟಲು ಅವಶ್ಯ ಕ್ರಮ ಕೈಗೊಳ್ಳಲಾಗುತ್ತಿದೆ.<br><br>4. ಕಳ್ಳಬೇಟೆಯಾಡುವಿಕೆ (Poaching) ಪ್ರಕರಣಗಳು ಕಂಡು ಬಂದಲ್ಲಿ ತಕ್ಷಣ ಕಾರ್ಯಾಚರಣೆ ಕೈಗೊಂಡು ಅಪರಾಧಿಗಳನ್ನು ಬಂಧಿಸಿ ಸಂಬಂಧಿಸಿದವರ ವಿರುದ್ಧ ವನ್ಯಜೀವಿ ಸಂರಕ್ಷಣಾ ಕಾಯ್ದೆ, 1972 ಹಾಗೂ ಸಂಬಂಧಿತ ಕಾನೂನುಗಳ ಅಡಿಯಲ್ಲಿ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br><br>5. ಅರಣ್ಯದಂಚಿನ ಆಯ್ದ ಪ್ರದೇಶಗಳಲ್ಲಿ **"AI"** Based Camera ಗಳನ್ನು ಅಳವಡಿಸಲಾಗಿದ್ದು, ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.<br><br>6. ರಾಜ್ಯದಲ್ಲಿ 04 ವರ್ಷಗಳಿಗೊಮ್ಮೆ ಹಾಗೂ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ವರ್ಷಕ್ಕೆ ಒಮ್ಮೆ ಹುಲಿ ಗಣತಿ ಕಾರ್ಯ ಕೈಗೊಂಡು ಹುಲಿಗಳ ಸಂಖ್ಯೆಯನ್ನು ಅಂದಾಜಿಸಲಾಗುತ್ತಿದ್ದು, ಸದರಿ ವರದಿಗಳನ್ವಯ ಹುಲಿಗಳ ಸಂತತಿ ರಕ್ಷಣೆ/ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಈ) | ಮಲೆ ಮಹದೇಶ್ವರ ವನ್ಯಜೀವಿ ವಿಭಾಗವನ್ನು "ಹುಲಿ ಸಂರಕ್ಷಿತ ವಲಯ" ಎಂದು ಘೋಷಿಸಲಾಗಿದೆಯೇ: ಇಲ್ಲದಿದ್ದರೆ ಕಾರಣಗಳೇನು: | ಮಲೈಮಹದೇಶ್ವರ ವನ್ಯಜೀವಿ ಧಾಮವನ್ನು ವನ್ಯಜೀವಿ (ಸಂರಕ್ಷಣಾ) ಕಾಯ್ದೆ 1972 ರ 38ವಿ (1) ರಂತೆ ಹುಲಿ ಸಂರಕ್ಷಿತ ಪ್ರದೇಶವೆಂದು ಘೋಷಿಸುವ ಪ್ರಸ್ತಾವನೆಯ ಕುರಿತಾಗಿ ಸಂಬಂಧಪಟ್ಟ ಪ್ರತಿಯೊಂದು ತಾಲ್ಲೂಕುಗಳ ಸ್ಥಳೀಯ ಜನರೊಂದಿಗೆ ಸಮಾಲೋಚಿಸಿ ಅಭಿಪ್ರಾಯ ಪಡೆದು, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಚಾಮರಾಜನಗರ ವೃತ್ತರವರು ವರದಿಯನ್ನು ಸಲ್ಲಿಸಿರುತ್ತಾರೆ. ಪ್ರಸ್ತುತ ಸದರಿ ವರದಿಯು ಪರಿಶೀಲನಾ ಹಂತದಲ್ಲಿರುತ್ತದೆ. |
| ಉ) | ಹುಲಿ ಸಾವು ತಡೆಯಲು ಸರ್ಕಾರ ಯಾವ ಯಾವ ಕ್ರಮಗಳನ್ನು ತೆಗೆದುಕೊಂಡಿದೆ? (ವಿವರಗಳನ್ನು ನೀಡುವುದು) | ಹುಲಿಗಳ ಅಸಹಜ ಸಾವುಗಳನ್ನು ತಪ್ಪಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>1. ವನ್ಯಜೀವಿ ವನ್ಯಧಾಮದ ಅನುಮೋದಿತ ನಿರ್ವಹಣಾ ಯೋಜನೆಯ ಪ್ರಕಾರ ಆವಾಸಸ್ಥಾನ, ಜಲಸಂಪನ್ಮೂಲ ಅಭಿವೃದ್ಧಿ ಕಾಮಗಾರಿಗಳು, ಅನಗತ್ಯವಾಗಿ ಬೆಳೆದ ಕಳೆಗಿಡಗಳನ್ನು ನಿರ್ಮೂಲನೆ ಮಾಡಿ ಹುಲ್ಲುಗಾವಲು ಪುನಶ್ಚೇತನ ಕಾಮಗಾರಿ ಕೈಗೊಳ್ಳಲಾಗುತ್ತಿದೆ.<br>2. ಇಲಾಖಾ ಸಿಬ್ಬಂದಿಗಳು ನಿರಂತರ ಗಸ್ತು ಸಂಚರಿಸಿ Mstripes ತಂತ್ರಾಂಶದ ಮೂಲಕ ಗಸ್ತಿನ ವಿವರಗಳನ್ನು ದಾಖಲಿಸಿ, ಅರಣ್ಯದಲ್ಲಿ ಹಾಗೂ ಅರಣ್ಯದಂಚಿನ ಪ್ರದೇಶಗಳಲ್ಲಿ ಉರುಳು ಪತ್ತೆ ಕಾರ್ಯಾಚರಣೆ, ಸೌರ ಬೇಲಿಗಳಿಗೆ ಅಕ್ರಮ ವಿದ್ಯುತ್ ಸಂಪರ್ಕ ಒದಗಿಸಿರುವುದನ್ನು ತಡೆಗಟ್ಟುವ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ.<br>3. ಕಳ್ಳಬೇಟೆ ತಡೆ ಶಿಬಿರಗಳನ್ನು ಸ್ಥಾಪಿಸಿ ವನ್ಯಜೀವಿಗಳ ಬೇಟೆಯಾಡುವುದನ್ನು ತಡೆಗಟ್ಟಲು ಅವಶ್ಯ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ರಾಜ್ಯದಲ್ಲಿ 04 ವರ್ಷಗಳಿಗೊಮ್ಮೆ ಹಾಗೂ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ವರ್ಷಕ್ಕೆ ಒಮ್ಮೆ ಹುಲಿ ಗಣತಿ ಕಾರ್ಯ ಕೈಗೊಂಡು ಹುಲಿಗಳ ಸಂಖ್ಯೆಯನ್ನು ಅಂದಾಜಿಸಲಾಗುತ್ತಿದ್ದು, ಸದರಿ ವರದಿಗಳನ್ವಯ ಹುಲಿಗಳ ಸಂತತಿ ರಕ್ಷಣೆ/ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಅಪಜೀ 347 ಎಫ್ ಡಬ್ಲ್ಯೂ ಎಲ್ 2025**

(signature)

**(ಈಶ್ವರ ಬಿ. ಖಂಡ್ರೆ)**

**ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು**